ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ,ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿ/ಪರೀಕ್ಷೆ/ಸೊ&ಫ/2016-17 ದಿನಾಂಕ: 25-05-2017.

**ಸು ತ್ತೋ ಲೆ**

**ವಿಷಯ:** ಜೂನ್/ಜುಲೈ-2017ರ ತಿಂಗಳಿನಲ್ಲಿ ನಡೆಸುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 18-05-2017.

* * * * *

ವಿಷಯಕ್ಕೆ ಸಂಬಂಧಿಸಿದಂತೆ ಜೂನ್/ಜುಲೈ-2017ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳಿಗೆ ರಿಪೀಟರ್ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆ ಅನ್ವಯ ಈ ಕೆಳಗಿನಂತೆ ನಿಗದಿಪಡಿಸಲಾಗಿತ್ತು.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಅಂತಿಮ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ | ಜಿಲ್ಲಾ ಉಪನಿರ್ದೇಶಕರ ಕಛೇರಿಯವರು ಕೇಂದ್ರ ಕಛೇರಿಗೆ ತಮ್ಮ ಸಿಬ್ಬಂದಿ ಮುಖಾಂತರ ಕೇಂದ್ರ ಕಛೇರಿಗೆ ಅರ್ಜಿಗಳನ್ನು ತಲುಪಿಸುವ ದಿನಾಂಖ ದಿನಾಂಕ |
|---|---|---|---|
| **23-05-2017** | **24-05-2017** | **25-05-2017** | **27-05-2017** |

ಸದರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ದಿನಾಂಕ 23-05-2017ರವರೆಗೆ ಕಾಲೇಜುಗಳಲ್ಲಿ ಸಲ್ಲಿಸಲಾದ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರು ತಮ್ಮ ಜಿಲ್ಲೆಗೆ ಸಂಬಂಧಿಸಿದ ಅರ್ಜಿಗಳನ್ನು ದಿನಾಂಕ **27-05-2017** ರಂದು ಕೇಂದ್ರ ಕಛೇರಿಗೆ ತಪ್ಪದೆ ತಲುಪಿಸುವುದು.

ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ ಮೇರೆಗೆ ಜೂನ್/ಜುಲೈ-2017, ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಅರ್ಜಿ ಸಲ್ಲಿಸಲು/ ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕಡೇ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ:

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತರಿಸಲಾದ ಕಡೇ ದಿನಾಂಕ | ಕಾಲೇಜಿನವರು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿದ ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ನೇರವಾಗಿ ಕೇಂದ್ರ ಕಛೇರಿಗೆ ತಲುಪಿಸುವ ದಿನಾಂಕ |
|---|---|---|
| **27-05-2017** | **29-05-2017** | **30-05-2017** |

ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತೃತ ದಿನಾಂಕಗಳಲ್ಲಿ ಯಾವುದೇ ದಂಡ ಶುಲ್ಕವಿರುವುದಿಲ್ಲ.

ಸದರಿ ಪರೀಕ್ಷೆಗಳಿಗೆ ರಿಪೀಟರ್ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಲ್ಲಿಸಲು ಇದೇ ಕಡೆ ಅವಕಾಶವಾಗಿರುತ್ತದೆ ಆದಕಾರಣ ಮೇಲೆ ತಿಳಿಸಿರುವ ದಿನಾಂಕದ ನಂತರ ಕಾಲೇಜಿನ ಪ್ರಾಂಶುಪಾಲರು ಯಾವುದೇ ಪುನರಾವರ್ತಿತ ಅಭ್ಯರ್ಥಿಗಳ ಅರ್ಜಿಗಳನ್ನು ಸ್ವೀಕರಿಸಕೂಡದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಯನ್ನು:

1) ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ. (ತಮ್ಮ ಜಿಲ್ಲೆಯ ಎಲ್ಲಾ ಕಾಲೇಜುಗಳ ಪ್ರಾಚಾರ್ಯರಿಗೆ ಸದರಿ ಮಾಹಿತಿ ನೀಡಲು)
2) ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, (ಇಲಾಖಾ ಅಂತರ್ ಜಾಲದಲ್ಲಿ ಪ್ರಕಟಿಸಲು)

96 Rep J-17 Date Extn